ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ

ಸಿ.ಸಿ. ಸಂಖ್ಯೆ **: 1073/2025**

| | | |
|---|---|---|
| ಪಿರ್ಯಾದಿ | : | ರಾಜ್ಯ, ಪರವಾಗಿ ಕಳಸ ಪೊಲೀಸ್ ಠಾಣೆ,<br>ಕಳಸ ತಾಲ್ಲೂಕು. |
| | | ವಿರುದ್ಧ |
| ಆರೋಪಿ | : | ಬಿ. ರವೀಂದ್ರ, ವಯಸ್ಸು 50 ವರ್ಷ,<br>ಬಿನ್ ಬಾಬುಗೌಡ,<br>ವಾಸಃ ಕಲ್ಲಾಟಗುಡ್ಡ, ಮಾವಿನಕೆರೆ ಗ್ರಾಮ,<br>ಕಳಸ ತಾಲ್ಲೂಕು. |

ದೋಷಾರೋಪಣೆ

ಶ್ರೀಮತಿ ಸುರಕ್ಷ ಕೆ.ಕೆ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಮೂಡಿಗೆರೆ, ಸಂಚಾರಿ ನ್ಯಾಯಾಲಯ ಕಳಸ ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ-

ದಿನಾಂಕ 13.03.2025 ರಂದು ಸಂಜೆ 07.40 ರ ಸಮಯದಲ್ಲಿ ಕಳಸ ಪೊಲೀಸ್ ಠಾಣಾ ವ್ಯಾಪ್ತಿಯ ಮಾವಿನಕೆರೆ ಗ್ರಾಮದ ಕಲ್ಲಾಟಗುಡ್ಡ ಎಂಬಲ್ಲಿ ಆರೋಪಿಯಾದ ನೀವು ನಿಮ್ಮ ಮಾಲೀಕತ್ವದಲ್ಲಿರುವ ಮಾವಿನಕೆರೆ ಗ್ರಾಮ ಪಂಚಾಯ್ತಿ ಖಾತೆ ಸಂಖ್ಯೆಃ 792 ರಲ್ಲಿರುವ ದಿನಸಿ ಅಂಗಡಿಯಲ್ಲಿ ಯಾವುದೇ ಮದ್ಯದ ಪರವಾನಗಿ ಇಲ್ಲದೇ ಅಕ್ರಮವಾಗಿ 3,560/- ರೂಪಾಯಿ ಮೌಲ್ಯದ 90 ಎಂ.ಎಲ್.ನ ಓರಿಜಿನಲ್ ಚಾಯ್ಸ್ ಡಿಲೆಕ್ಸ್ ವಿಸ್ಕಿಯ 89 ಮದ್ಯ ತುಂಬಿದ ಟೆಟ್ರಾ ಪ್ಯಾಕ್ ಗಳನ್ನು ಮಾರಾಟ ಮಾಡುವ ಉದ್ದೇಶದಿಂದ ಸಂಗ್ರಹ ಮಾಡಿ ಇಟ್ಟುಕೊಂಡಿದ್ದು, ಪೊಲೀಸರು ನಡೆಸಿದ ದಾಳಿ ಕಾಲಕ್ಕೆ ಸಿಕ್ಕಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ **32** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

**2.** ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ಸದರಿ ಮದ್ಯವನ್ನು ಯಾವುದೇ ಪಾಸ್ ಅಥವಾ ಪರವಾನಗಿ ಇಲ್ಲದೇ ಅಕ್ರಮವಾಗಿ ನಿಮ್ಮ ವಶದಲ್ಲಿಟ್ಟುಕೊಂಡು ಪೊಲೀಸರು ನಡೆಸಿದ ದಾಳಿ ಕಾಲಕ್ಕೆ ಸಿಕ್ಕಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ **34** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

ಸದರಿ ಮೇಲ್ಕಂಡ ಆರೋಪಗಳನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಮಾಡಿದ್ದರಿಂದ, ಅವುಗಳು ಈ ನ್ಯಾಯಾಲಯದಿಂದ ವಿಚಾರಣೆಯಾಗತಕ್ಕದೆಂದು ಆದೇಶಿಸಲಾಗಿದೆ.

ಪ್ರ: 1. ಈಗ ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿದ್ದೀರಾ? ಅವುಗಳು ನಿಮಗೆ ಅರ್ಥವಾಯಿತೇ?

ಆರೋಪಿಯ ಉತ್ತರ:

ಪ್ರ: 2. ನೀವು ದೋಷಾರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರ:

*(*ಆರೋಪಿಗೆ ದಿನಾಂಕ 04.08.2025 ರಂದು ದೋಷಾರೋಪಣೆಯನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ*)*

**sd/-**

ಮೂಡಿಗೆರೆ
ದಿನಾಂಕ: 04.08.2025

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ ಮೂಡಿಗೆರೆ,
ಸಂಚಾರಿ ನ್ಯಾಯಾಲಯ ಕಳಸ.